ಮುಂಡರಗಿ ತಾಲ್ಲೂಕು ಕಲಕೇರಿ ಗ್ರಾಮದ ಶ್ರೀ ಶರಣಬಸವೇಶ್ವರ ವಿದ್ಯಾ ಪೀಠಕ್ಕೆ ಡಿ ಇಡಿ ಕಾಲೇಜು ಮಂಜೂರಾತಿ

165 (335) ಶ್ರೀ ಪಾಟೀಲ್ ಸಿದ್ದಲಿಂಗನಗೌಡ ಸಿದ್ದನಗೌಡ (ಮುಂಡರಗಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಗದಗ ಜಿಲ್ಲೆಯ ಮುಂಡರಗಿ ತಾಲ್ಲೂಕು ಕಲಗೇರಿ ಗ್ರಾಮದ ಎಸ್ ಸಿ , ಎಸ್ ಟಿ ಆಡಳಿತ ಮಂಡಳಿ ವತಿಯಿಂದ ನಡೆಯುವ ಶ್ರೀ ಶರಣಬಸವೇಶ್ವರ ವಿದ್ಯಾ ಪೀಠವು ಡಿ ಇಡಿ ಕಾಲೇಜ್ ಪ್ರಾರಂಭಿಸಲು ಅರ್ಜಿ ಹಾಕಿದ್ದು ಈ ವರ್ಷ ಮಂಜೂರು ಮಾಡಲು ಆದೇಶ ಹೊರಡಿಸಲಾಗುವುದೆ.

ಆ) ಆದೇಶ ಹೊರಡಿಸದಿದ್ದರೆ ಆದೇಶ ಹೊರಡಿಸಲು ಕ್ರಮ ಕೈಗೊಳ್ಳಲಾಗುವುದೆ?

ಪ್ರೊ॥ ಬಿ ಕೆ ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಮತ್ತು ಆ) ಸರ್ಕಾರದ ಪರಿಶೀಲನೆಯಲ್ಲಿದೆ

ಮುಂಡರಗಿಯಲ್ಲಿ ಕನ್ನಡ ಸಾಹಿತ್ಯ ಭವನ ನಿರ್ಮಾಣ

166 (338) ಶ್ರೀ ಪಾಟೀಲ್ ಸಿದ್ದಲಿಂಗನಗೌಡ ಸಿದ್ದನಗೌಡ (ಮುಂಡರಗಿ) ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಗದಗ ಜಿಲ್ಲೆ ಮುಂಡರಗಿಯಲ್ಲಿ ಕನ್ನಡ ಸಾಹಿತ್ಯ ಭವನ ಕಟ್ಟಲು ಸ್ಥಳ ಒದಗಿಸಲಾಗಿದೆಯೇ

ಆ) ಸಾಹಿತ್ಯ ಭವನ ಕಟ್ಟಲು ಸರ್ಕಾರ ಆದೇಶ ನೀಡಿತ್ತೇ

ಇ) ಹಾಗಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀಮತಿ ರಾಣಿ ಸತೀಶ್ (ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಸಚಿವರು)

ಅ) ಇಲ್ಲ

ಆ) ಇಲ್ಲ

ಇ) ಉದ್ಭವಿಸುವುದಿಲ್ಲ

ಬೆಳ್ತಂಗಡಿ ತಾಲ್ಲೂಕು ಶಿಕ್ಷಣ ಸಂಸ್ಥೆಗಳ ವಿವರ

169 (207) ಶ್ರೀ ಪ್ರಭಾಕರ ಬಂಗೇರ ಕೆ (ಬೆಳ್ತಂಗಡಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಯಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸರ್ಕಾರಿ ಪ್ರೌಢಶಾಲೆಗಳ ಸಂಖ್ಯೆ ಎಷ್ಟು

ಆ) ಸರ್ಕಾರಿ ಹಿರಿಯ ಹಾಗೂ ಕಿರಿಯ ಪ್ರಾಥಮಿಕ ಪಾಠಶಾಲೆಗಳ ಸಂಖ್ಯೆ, ವಿವರ ಒದಗಿಸುವುದು

ಇ) ಎಷ್ಟು ಶಾಲಾ ಕಾಲೇಜುಗಳಿಗೆ ಸ್ವಂತ ಕಟ್ಟಡ ಇದೆ ಎಷ್ಟು ಶಾಲಾ ಕಾಲೇಜುಗಳಿಗೆ ಸ್ವಂತ ಕಟ್ಟಡಗಳೆಲ್ಲ (ವಿವರ ನೀಡುವುದು)

ಈ) ಈ ಶಾಲಾ ಕಾಲೇಜುಗಳಲ್ಲಿ ಬೋಧಿಸುವ ಶಿಕ್ಷಕರ ವಿವರ ನೀಡುವುದು, ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು

ಉ) ಇವುಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ

ಊ) ಬೆಳ್ತಂಗಡಿ ವಿಧಾನಸಭಾ ಕ್ಷೇತ್ರಕ್ಕೆ ಹೊಸದಾಗಿ ಮಂಜೂರು ಮಾಡಲು ಉದ್ದೇಶಿಸಿರುವ ಶಾಲಾ ಕಾಲೇಜುಗಳೆಷ್ಟು.